# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹೇಮಾವತಿ ನದಿಯಿಂದ ಗುಡ್ಡೇಹೊಸಹಳ್ಳಿ ಗ್ರಾಮದ ಬಳಿಯಿಂದ ಲಿಫ್ಟ್ ಮುಖೇನ ನೀರನ್ನು ಎತ್ತಿ ಕೆ.ಆರ್.ಪೇಟೆ, ನಾಗಮಂಗಲ ಹಾಗೂ ಚನ್ನರಾಯಪಟ್ಟಣ ತಾಲ್ಲೂಕಿನ ಕೆರೆಗಳನ್ನು ಕುಡಿಯುವ ನೀರಿಗಾಗಿ ತುಂಬಿಸುವ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

** ** **

*ಓದಲಾಗಿದೆ :-*

1. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು, ಇವರ ಪತ್ರ ಸಂಖ್ಯೆ:ಕಾನೀನಿ/ಶಾಂ.ಸ-3/626/ಗುಡ್ಡೇಹೊಸಹಳ್ಳಿ ಡಿಡಬ್ಲ್ಯೂಎಸ್/2017-18/4116, ದಿನಾಂಕ:27-02-2018
2. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು, ಇವರ ಪತ್ರ ಸಂಖ್ಯೆ:ಕಾನೀನಿ/ಶಾಂ.ಸ-3/626/ಗುಡ್ಡೇಹೊಸಹಳ್ಳಿ ಡಿಡಬ್ಲ್ಯೂಎಸ್/2017-18/4493, ದಿನಾಂಕ:19-03-2018

*ಪ್ರಸ್ತಾವನೆ :-*

ಮೇಲೆ ಓದಲಾದ ಪತ್ರಗಳಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು, ಇವರು ಉಲ್ಲೇಖಿತ ವಿಷಯದ ಬಗ್ಗೆ ಪ್ರಸ್ತಾವನೆ ಸಲ್ಲಿಸುತ್ತಾ, ಮಂಡ್ಯ ಜಿಲ್ಲೆಯ ಕೆ.ಆರ್.ಪೇಟೆ, ನಾಗಮಂಗಲ ಹಾಗೂ ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ತಾಲ್ಲೂಕಿನ ಭಾಗಶಃ ಪ್ರದೇಶವು ಬರ ಪೀಡಿತವಾಗಿದ್ದು, ಈ ಭಾಗದ 64 ಗ್ರಾಮಗಳಲ್ಲಿ ಕುಡಿಯುವ ನೀರಿನ ತೀವ್ರ ಕೊರತೆಯಿರುತ್ತದೆ ಹಾಗೂ ಮಳೆಯ ಅಭಾವದಿಂದ ಬಹುತೇಕ ಗ್ರಾಮಗಳು ಸಾಮಾಜಿಕ ಹಾಗೂ ಆರ್ಥಿಕವಾಗಿ ಹಿಂದುಳಿದಿವೆ ಮತ್ತು ಈ ಪ್ರದೇಶದಲ್ಲಿ ಕೊಳವೆ ಬಾವಿಗಳನ್ನು ಕೊರೆಯಲಾಗಿದ್ದು, 450 ರಿಂದ 500 ಅಡಿ ಆಳದಲ್ಲಿ ನೀರು ದೊರೆತಿರುವ ಅನೇಕ ಕೊಳವೆ ಬಾವಿಗಳ ನೀರಿನಲ್ಲಿ Nitrate ಅಧಿಕ ಪ್ರಮಾಣದಲ್ಲಿರುವುದರಿಂದ ನೀರು ಕುಡಿಯಲು ಯೋಗ್ಯವಾಗಿರುವುದಿಲ್ಲ ಎಂದು ವರದಿ ಮಾಡಿರುತ್ತಾರೆ.

2. ಈ ಹಿನ್ನೆಲೆಯಲ್ಲಿ, ಕೆ.ಆರ್.ಪೇಟೆ ತಾಲ್ಲೂಕಿನ ಗೂಡೆಹೊಸಹಳ್ಳಿ ಗ್ರಾಮದ ಬಳಿ ಹೇಮಾವತಿ ನದಿಯಿಂದ ಲಿಫ್ಟ್ ಮುಖೇನ ನೀರನ್ನು ಎತ್ತಿ ಕೆ.ಆರ್.ಪೇಟೆ, ನಾಗಮಂಗಲ ಹಾಗೂ ಚನ್ನರಾಯಪಟ್ಟಣ ತಾಲ್ಲೂಕಿನ 69 ಕೆರೆಗಳು ಹಾಗೂ 23 ಕಟ್ಟೆಗಳನ್ನು ಕುಡಿಯುವ ನೀರಿಗಾಗಿ ತುಂಬಿಸಲು ಪ್ರಸ್ತಾಪಿಸಿದ್ದು, ಇದರಿಂದ 64 ಗ್ರಾಮಗಳು ಪ್ರಯೋಜನೆ ಪಡೆಯುವುದಲ್ಲದೇ, ಈ ಭಾಗದ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಲಭ್ಯತೆಯನ್ನು ನೀಡಿದಂತಾಗುತ್ತದೆ ಹಾಗೂ ಅಂತರ್ಜಲ ಮಟ್ಟ ಕೂಡ ಅಭಿವೃದ್ಧಿಯಾಗುತ್ತದೆ.

3. ಸದರಿ 64 ಗ್ರಾಮಗಳ ಗ್ರಾಮಸ್ಥರ ಬವಣೆಯನ್ನು ನಿವಾರಿಸಲು, ಗೂಡೆಹೊಸಹಳ್ಳಿ ಗ್ರಾಮದ ಬಳಿ ಹೇಮಾವತಿ ನದಿಯಿಂದ ಜುಲೈ ನಿಂದ ಸೆಪ್ಟೆಂಬರ್ ಅವಧಿಯಲ್ಲಿ 54 ದಿನಗಳಲ್ಲಿ 310.29 ಎಂ.ಸಿ.ಎಫ್.ಟಿ (67 ಕ್ಯೂಸೆಕ್ಸ್) ನೀರನ್ನು ಮೊದಲನೇ ಹಂತದಲ್ಲಿ 104.84 ಮೀ. ಎರಡನೇ ಹಂತದ ಬಲಭಾಗದಲ್ಲಿ 123.12 ಮೀ. ಹಾಗೂ ಎರಡನೇ ಹಂತದ ಎಡ ಭಾಗದಲ್ಲಿ 42.10 ಮೀ. ಹೆಡ್‌ಗೆ ಎತ್ತಿ ಕೆ.ಆರ್.ಪೇಟೆ, ನಾಗಮಂಗಲ ಹಾಗೂ ಚನ್ನರಾಯಪಟ್ಟಣ ತಾಲ್ಲೂಕಿನ 69 ಕೆರೆಗಳು ಹಾಗೂ 23 ಕಟ್ಟೆಗಳನ್ನು ತುಂಬಿಸಲು ಯೋಜನೆಯನ್ನು ರೂಪಿಸಲಾಗಿದೆ. ಈ ಯೋಜನೆಯಿಂದ 64 ಗ್ರಾಮಗಳ ಪ್ರದೇಶದಲ್ಲಿ ಅಂತರ್ಜಲ ಮಟ್ಟದಲ್ಲಿ ಏರಿಕೆಯಾಗುವುದಲ್ಲದೇ ಕೆರೆಗಳಲ್ಲಿ ನೀರು ತುಂಬಿಸುವುದರಿಂದ ಜನ-ಜಾನುವಾರುಗಳು ನೇರ ಪ್ರಯೋಜನ ಪಡೆಯುತ್ತಾರೆ.

4. <u>ನೀರಿನ ಲಭ್ಯತೆ</u> :- ಕೆ.ಆರ್.ಪೇಟೆ ತಾಲ್ಲೂಕಿನ ಗುಡ್ಡೆಹೊಸಹಳ್ಳಿ ಗ್ರಾಮದ ಬಳಿ ಹೇಮಾವತಿ ನದಿಯಿಂದ ನೀರನ್ನು ಎತ್ತಿ ಕೆ.ಆರ್.ಪೇಟೆ, ನಾಗಮಂಗಲ ಹಾಗೂ ಚನ್ನರಾಯಪಟ್ಟಣ ತಾಲ್ಲೂಕಿನ 69 ಕೆರೆ ಹಾಗೂ ಕಟ್ಟೆಗಳನ್ನು ಕುಡಿಯುವ ನೀರಿಗಾಗಿ ಶೇ.70 ರಷ್ಟನ್ನು ತುಂಬಿಸಲು ಯೋಜಿಸಲಾಗಿದ್ದು, 0.31029 ಟಿ.ಎಂ.ಸಿ. ನೀರಿನ ಅವಶ್ಯಕತೆಯಿರುತ್ತದೆ. ಸದರಿ ನೀರನ್ನು ಎತ್ತುವ ಸ್ಥಳದಲ್ಲಿ 14.42 ಟಿ.ಎಂ.ಸಿ. ನೀರಿನ ಲಭ್ಯತೆಯಿದ್ದು, ಈ ಯೋಜನೆಗೆ ಅವಶ್ಯವಿರುವ ನೀರಿನ ಲಭ್ಯತೆಯಿರುತ್ತದೆ ಎಂದು ಮೇಲೆ ಓದಲಾದ (2)ರಲ್ಲಿ ವರದಿ ಮಾಡಲಾಗಿದೆ.

.....2..,

5. ಮುಂದುವರೆದು, ಕಾವೇರಿ ನ್ಯಾಯಾಧೀಕರಣ ತೀರ್ಪಿನಲ್ಲಿ ಸಣ್ಣ ನೀರಾವರಿ ಕೆರೆಗಳಿಗೆ 63.83 ಟಿ.ಎಂ.ಸಿ ನೀರನ್ನು ಹಂಚಿಕೆಯಾಗಿರುತ್ತದೆ. ಇದರನ್ವಯ, ಮೇಲಿನ ಯೋಜನೆ ಅಡಿಯಲ್ಲಿ ಪ್ರಸ್ತಾಪಿಸಿರುವ ಕೆರೆಗಳ ಅಚ್ಚುಕಟ್ಟು ಪ್ರದೇಶವು 2371.25 ಹೆ. ಆಗಿದ್ದು, ಇದಕ್ಕಾಗಿ 52 ಇಂಚು delta ಪರಿಗಣಿಸಿದ್ದು, ಒಟ್ಟಾರೆ 1106 ಎಂ.ಸಿ.ಎಫ್.ಟಿ. ನೀರಿನ ಅವಶ್ಯಕತೆ ಇರುತ್ತದೆ. ಈ ಪೈಕಿ 310.29 ಎಂ.ಸಿ.ಎಫ್.ಟಿ.ಯನ್ನು ಸದರಿ ಕುಡಿಯುವ ನೀರಿನ ಯೋಜನೆಗೆ ಉಪಯೋಗಿಸಿಕೊಳ್ಳಲು ಪ್ರಸ್ತಾಪಿಸಲಾಗಿದೆ. ಸದರಿ ಪ್ರಸ್ತಾವನೆಗೆ ದಿನಾಂಕ:27-01-2018 ರಂದು ನಡೆದ ನಿಗಮದ 61ನೇ ಮಂಡಳಿಯ ಸಭೆಯಲ್ಲಿ ಅನುಮೋದನೆ ನೀಡಲಾಗಿರುತ್ತದೆ.

6. ಸದರಿ ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ : ಜಸಂಇ 38 ಎಂಎಂಕೆ 2018,**
**ಬೆಂಗಳೂರು, ದಿನಾಂಕ : 21-01-2019**

ಹೇಮಾವತಿ ನದಿಯಿಂದ ಗುಡ್ಡೇಹೊಸಹಳ್ಳಿ ಗ್ರಾಮದ ಬಳಿಯಿಂದ ಲಿಫ್ಟ್ ಮುಖೇನ 310.29 ಎಂ.ಸಿ.ಎಫ್.ಟಿ. ನೀರನ್ನು ಎತ್ತಿ ಕೆ.ಆರ್.ಪೇಟೆ, ನಾಗಮಂಗಲ ಹಾಗೂ ಚನ್ನರಾಯಪಟ್ಟಣ ತಾಲ್ಲೂಕಿನ ಕೆರೆಗಳನ್ನು ಕುಡಿಯುವ ನೀರಿಗಾಗಿ ತುಂಬಿಸುವ ಕಾಮಗಾರಿಯ ರೂ.212.00 ಕೋಟಿಗಳ (ರೂಪಾಯಿ ಎರಡುನೂರಾ ಹನ್ನೆರಡು ಕೋಟಿಗಳು ಮಾತ್ರ) ಅಂದಾಜಿಗೆ ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

2. ಈ ಆದೇಶವನ್ನು ಆರ್ಥಿಕ ಇಲಾಖೆಯು ತನ್ನ ಟಿಪ್ಪಣಿ ಸಂಖ್ಯೆ:ಆಇ 14 ಆಕೋ-1/2018, ದಿನಾಂಕ:09-01-2019, ರಲ್ಲಿ ರಲ್ಲಿ ನೀಡಲಾದ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
21/01/19
(ಬಿ.ಹರಿನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-2)
ಜಲ ಸಂಪನ್ಮೂಲ ಇಲಾಖೆ.

ಇವರಿಗೆ :-

1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ ಲೆಕ್ಕಪರಿಶೋಧನ), ಕರ್ನಾಟಕ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ನೀರಾವರಿ (ದಕ್ಷಿಣ) ವಲಯ, ಮೈಸೂರು.
4. ಮುಖ್ಯ ಇಂಜಿನಿಯರ್, ಹೇಮಾವತಿ ಯೋಜನಾ ವಲಯ, ಗೊರೂರು.
5. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ. ಆರ್ಥಿಕ ಕೋಶ), ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಉಪ ಕಾರ್ಯದರ್ಶಿ (ಸಚಿವ ಸಂಪುಟ), ಕರ್ನಾಟಕ ಸರ್ಕಾರ (ಪ್ರಕರಣ ಸಂಖ್ಯೆ:ಸಿ-32/2019, ದಿನಾಂಕ:10-01-2019).
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.